## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎಸ್.ಪಿ.ಪಾಟೀಲ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹುಕ್ಕೇರಿ ( ಹಾಲಿ ನಿವೃತ್ತ) ಹಾಗೂ ಇನ್ನಿತರರ ವಿರುದ್ಧ ಶಿಸ್ತು ಕ್ರಮ - ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸುವ ಬಗ್ಗೆ - ಆದೇಶ.

ಓದಲಾಗಿದೆ:- 1) ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. Compt/ Uplok/ BGM-230 /2011 / ARE-5 ದಿನಾಂಕ. 24.09.2016.

2) ಮಾನ್ಯ ಉಪ ಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ Compt/ Uplok/ BGM-230 /2011 / ARE-5 ದಿನಾಂಕ. 22.09.2016.

-----

### ಪ್ರಸ್ತಾವನೆ

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 24.09.2016ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತ-1ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತ-1ರವರು ಲೋಕಾಯುಕ್ತ ಕಾಯ್ದೆ ಕಲಂ 12 (3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ತಾನಾಜಿ ಹರಿಬಾ ಪೊವಾರ, ಮಾಜಿ ಸೈನಿಕ, ಪೋ//ಅಂಕಲೆ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರು ಅಂಕಲೆ ಗ್ರಾಮ ಪಂಚಾಯತಿಯು ಸರ್ವೆ ನಂಬರ್ 137 ರಿಂದ 154 ಮತ್ತು 154ರಿಂದ 156ರಲ್ಲಿ ಕೈಗೊಳ್ಳಲಾದ ರಸ್ತೆ ಕಾಮಗಾರಿಯು ಗ್ರಾಮ ರಸ್ತೆ ನಕಾಶೆಯ ಪ್ರಕಾರ ಇರುವುದಿಲ್ಲವೆಂದು ಹಾಗೂ ಕಳಪೆಮಟ್ಟದ್ದಾಗಿದೆಯೆಂದು ಇದಕ್ಕೆ ಈ ಕೆಳಕಂಡವರು ಜವಾಬ್ದಾರರಾಗಿದ್ದಾರೆಂದು ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ.

1. ಶ್ರೀ ಎಸ್.ಪಿ.ಪಾಟೀಲ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹುಕ್ಕೇರಿ (ಹಾಲಿ ನಿವೃತ್ತ)
2. ಶ್ರೀ ಎಸ್.ಕೆ.ಪಾಟೀಲ, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹುಕ್ಕೇರಿ
3. ಶ್ರೀ ಮಲ್ಲಪ್ಪ ಅಂಕಲಿ, ಗುತ್ತಿಗೆದಾರರು.

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ ಇವರಿಂದ ವರದಿ ಪಡೆಯಲಾಗಿದ್ದು, ಹುಕ್ಕೇರಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕೈಗೊಳ್ಳಲಾದ ಎರಡು ರಸ್ತೆ ಕಾಮಗಾರಿಗಳಿಗೆ ಕ್ರಮವಾಗಿ ರೂ. 2,99,982/- ಮತ್ತು ರೂ. 4,19,934/- ಗಳನ್ನು ವೆಚ್ಚ ಮಾಡಲಾಗಿದ್ದು, ಸದರಿ ರಸ್ತೆ ಕಾಮಗಾರಿಗಳು ಅಪೂರ್ಣವಾಗಿರುತ್ತವೆಂದು ವರದಿ ಮಾಡಿರುತ್ತಾರೆ.

ಸದರಿ ಪ್ರಕರಣದಲ್ಲಿ ಲೋಕಾಯುಕ್ತ ಕಚೇರಿಯು ತನಿಖೆಯನ್ನು ಕೈಗೊಂಡು ಸಲ್ಲಿಸಿರುವ ವರದಿಯಲ್ಲಿ ಈ ಕೆಳಕಂಡ ಅಂಶಗಳು ವ್ಯಕ್ತವಾಗುತ್ತವೆ:-

1) ಅಂಕಲೆ ಗ್ರಾಮದ ಶ್ರೀ ಪವಾರ್ ಮತ್ತು ಪುಂಡೆ ಇವರ ಜಮೀನುಗಳಲ್ಲಿ ಕೈಗೊಳ್ಳಲಾದ ರಸ್ತೆ ಕಾಮಗಾರಿಗೆ ರೂ. 4,19,936ಗಳ ವೆಚ್ಚಮಾಡಲಾಗಿದ್ದು, ಸದರಿ ರಸ್ತೆ ಕಾಮಗಾರಿಯು ಅಪೂರ್ಣವಾಗಿದೆ.

2) ರಸ್ತೆ ಕಾಮಗಾರಿಯನ್ನು ಗ್ರಾಮ ರಸ್ತೆ ನಕಾಶೆಯ ಪ್ರಕಾರ ಅನುಷ್ಠಾನಗೊಳಸದೇ ಅನಧಿಕೃತವಾಗಿ ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಸಲಾಗಿದ್ದು, ಇದಕ್ಕೆ ರೂ. 2,99,982/-ಗಳ ವೆಚ್ಚಮಾಡಲಾಗಿದೆ.

ಮೇಲಿನ ಆಪಾದನೆಗಳಗೆ ಈ ಕೆಳಕಂಡವರು ಜವಾಬ್ದಾರರಾಗಿರುತ್ತಾರೆಂದು ತಿಳಸಿರುತ್ತಾರೆ:-

1. ಶ್ರೀ ಎಸ್.ಪಿ.ಪಾಟೀಲ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹುಕ್ಕೇರಿ (ಹಾಲಿ ನಿವೃತ್ತ)
2. ಶ್ರೀ ಎಸ್.ಕೆ.ಪಾಟೀಲ, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹುಕ್ಕೇರಿ.
3. ಶ್ರೀ ಎ.ಎ.ಹಲ್ಲೂರೆ, ಕಾರ್ಯದರ್ಶಿ, ಅಂಕಲೆ ಗ್ರಾಮ ಪಂಚಾಯತಿ,
4. ಶ್ರೀ ಬಿ.ಡಿ.ನಾಯಕವಾಡಿ, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹುಕ್ಕೇರಿ.

ಸದರಿ ತನಿಖಾ ವರದಿಗೆ ಸಂಬಂಧಿಸಿದಂತೆ ಮೇಲಿನ 4 ಜನ ಆಪಾದಿತರಿಂದ ಲೋಕಾಯುಕ್ತ ಕಚೇರಿಯು ಆಕ್ಷೇಪಣೆಗಳನ್ನು ಕೇಳಲಾಗಿದ್ದು, ಸದರಿಯವರುಗಳು ಆಕ್ಷೇಪಣೆಗಳನ್ನು ಸಲ್ಲಿಸಿರುವುದಿಲ್ಲವೆಂದು ತಿಳಸಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರವರು ತನಿಖಾ ವರದಿ, ಆಪಾದಿತರು ಸಲ್ಲಿಸಿರುವ ಆಕ್ಷೇಪಣೆಗಳು, ಮತ್ತು ದಾಖಲಾತಿಗಳನ್ನು ಪರಿಶೀಲಿಸಿದ್ದು, ಪ್ರಕರಣದಲ್ಲಿ ಭಾಗಿಯಾಗಿರುವ ಆಪಾದಿತರು ಅಂಕಲೆ ಗ್ರಾಮದಲ್ಲಿ ಕೈಗೊಂಡ ರಸೆ ಕಾಮಗಾರಿಯನ್ನು ಗ್ರಾಮ ರಸ್ತೆ ನಕಾಶೆಯ ಪ್ರಕಾರ ಅನುಷ್ಠಾನಗೊಳಸಿರುವುದಿಲ್ಲವೆಂದು, ಸಕ್ಷಮ ಪ್ರಾಧಿಕಾರದ ಅನುಮೋದನೆಯನ್ನು ಪಡೆಯದೇ ಖಾಸಗಿ ಜಮೀನಿನಲ್ಲಿ ನಿರ್ಮಿಸಿ ರೂ. 2,99,982ಗಳನ್ನು ಸರ್ಕಾರಕ್ಕೆ ಆರ್ಥಿಕ ನಷ್ಟ

ಉಂಟು ಮಾಡಿದ್ದಾರೆಂದು ಹಾಗೂ ಶ್ರೀ ಪವಾರ್ ಮತ್ತು ಪುಂಡೆ ಇವರ ಜಮೀನುಗಳಲ್ಲಿ ಕೈಗೊಳ್ಳಲಾದ ರಸ್ತೆ ಕಾಮಗಾರಿಯು ಪೂರ್ಣಗೊಂಡಿಲ್ಲದಿದ್ದರೂ ಸಹ ಮಂಜೂರಾದ ಅಂದಾಜಿನ ಪ್ರಕಾರ ಪೂರ್ತಿ ಹಣವನ್ನು ಗುತ್ತಿಗೆದಾರರಿಗೆ ಪಾವತಿಸಿರುತ್ತಾರೆಂದು, ಅಲ್ಲದೆ, ಸದರಿ ಕಾಮಗಾರಿಯನ್ನು ಕಳಪೆಯಾಗಿ ನಿರ್ವಹಿಸಿ ಹಣ ದುರುಪಯೋಗಪಡಿಸಿ ಕೊಂಡಿರುತ್ತಾರೆಂದು, ಸದರಿಯವರುಗಳ ವಿರುದ್ಧದ ನಡವಳಿಕೆಯನ್ನು ಕೈ ಬಿಡಲು ಸೂಕ್ತ / ಸಮಂಜಸ / ಸಮಾಧಾನಕರ ಅಂಶಗಳು ಕಂಡುಬಂದಿಲ್ಲವೆಂದು, ಇವರುಗಳು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ತೋರದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯ ಲೋಪ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರುಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪ ಲೋಕಾಯುಕ್ತರವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಅಲ್ಲದೆ, ಶ್ರೀ ಎಸ್.ಪಿ. ಪಾಟೀಲ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹುಕ್ಕೇರಿ ಇವರು ಪ್ರಸ್ತುತ ಸರ್ಕಾರಿ ಸೇವೆಯಿಂದ ನಿವೃತ್ತರಾಗಿರುವುದರಿಂದ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214 (2)(b)(i) ರಂತೆ ಮಂಜೂರಾತಿ ನೀಡುವಂತೆ ಮಾನ್ಯ ಉಪ ಲೋಕಾಯುಕ್ತರವರು ಕೋರಿದ್ದಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ಮಾಹಿತಿ ಮತ್ತು ದಾಖಲೆಗಳನ್ನು ಪರಿಶೀಲಿಸಿದೆ. ಪ್ರಕರಣದಲ್ಲಿ ಭಾಗಿಯಾಗಿರುವ ಆಪಾದಿತರು ಪ್ರಶ್ನಿತ ರಸ್ತೆ ಕಾಮಗಾರಿಗಳು ಪೂರ್ಣಗೊಳ್ಳದಿದ್ದರೂ ಸಹ ಗುತ್ತಿಗೆದಾರರಿಗೆ ಪೂರ್ಣ ಹಣ ಪಾವತಿಸಿರುವುದು ಹಾಗೂ ಕಾಮಗಾರಿಯನ್ನು ಕಳಪೆಯಾಗಿ ನಿರ್ಮಿಸಿರುವುದು / ಗ್ರಾಮ ರಸ್ತೆ ನಕಾಶೆಯ ಪ್ರಕಾರ ನಿರ್ಮಿಸದೇ ಹಾಗೂ ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆಯದೇ ಖಾಸಗಿಯವರ ಜಮೀನಿನಲ್ಲಿ ಸರ್ಕಾರಿ ರಸ್ತೆ ನಿರ್ಮಾಣ ಮಾಡಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿರುವುದು ದಾಖಲೆಗಳಿಂದ ಕಂಡುಬರುತ್ತದೆ. ಹಾಗಾಗಿ ಸದರಿಯವರುಗಳು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ ನಿಯಮ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಇವರ ವಿರುದ್ಧದ ಆರೋಪದ ಬಗ್ಗೆ ಇಲಾಖಾ ವಿಚಾರಣೆ ನಡೆಸುವುದು ಅವಶ್ಯವಿರುತ್ತದೆ. ಆದ್ದರಿಂದ, ಸದರಿಯವರುಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-1 ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಆದೇಶ ಸಂಖ್ಯೆ : ಗ್ರಾಅಪ 123 ಇಎನ್‌ಕ್ಯೂ 2016 ಬೆಂಗಳೂರು,</u>**
**<u>ದಿನಾಂಕ.28.10.2016</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಈ ಕೆಳಕಂಡ ಆಪಾದಿತ ಅಧಿಕಾರಿಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು

-

1957ರ ನಿಯಮ 11ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತ-1ರವರಿಗೆ ವಹಿಸಿ ಆದೇಶಿಸಿದೆ:-

1. ಶ್ರೀ ಎಸ್.ಕೆ.ಪಾಟೀಲ, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹುಕ್ಕೇರಿ.
2. ಶ್ರೀ ಎ.ಎ.ಹಲ್ಲೂರೆ, ಕಾರ್ಯದರ್ಶಿ, ಅಂಕಲೆ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ
3. ಶ್ರೀ ಬಿ.ಡಿ.ನಾಯಕವಾಡಿ, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹುಕ್ಕೇರಿ.

ಶ್ರೀ ಎಸ್.ಪಿ. ಪಾಟೀಲ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹುಕ್ಕೇರಿ (ಹಾಲಿ ನಿವೃತ್ತ) ಇವರ ವಿರುದ್ಧದ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ಮತ್ತು 11-ಎ ರಂತೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214 (2)(b)(i) ರಂತೆ ಮಂಜೂರಾತಿ ನೀಡಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 14 (ಎ) ರನ್ವಯ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-1ರವರಿಗೆ ವಹಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ್ ಪೊತ್ತಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ.
7. ಅಪರ ನಿಬಂಧಕರು ವಿಚಾರಣೆಗಳು-5, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಶ್ರೀ ಎಸ್.ಪಿ. ಪಾಟೀಲ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹುಕ್ಕೇರಿ (ಹಾಲಿ ನಿವೃತ್ತ) – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ ಇವರ ಮುಖಾಂತರ.

9. ಶ್ರೀ ಎಸ್.ಕೆ.ಪಾಟೀಲ, ಅಂದಿನ ಸಹಾಯಕ ಇಂಜನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹುಕ್ಕೇರಿ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ , ಜಿಲ್ಲಾ ಪಂಚಾಯತ್, ಬೆಳಗಾವಿ ಇವರ ಮುಖಾಂತರ.
10. ಶ್ರೀ ಎ.ಎ.ಹಲ್ಲೂರೆ, ಕಾರ್ಯದರ್ಶಿ, ಅಂಕಲೆ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ , ಜಿಲ್ಲಾ ಪಂಚಾಯತ್, ಬೆಳಗಾವಿ ಇವರ ಮುಖಾಂತರ.
11. ಶ್ರೀ ಬಿ.ಡಿ.ನಾಯಕವಾಡಿ, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹುಕ್ಕೇರಿ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ , ಜಿಲ್ಲಾ ಪಂಚಾಯತ್, ಬೆಳಗಾವಿ ಇವರ ಮುಖಾಂತರ.
12. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
13. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು–ಎ,ಬಿ&ಸಿ).
14. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
15. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ : ಕಂಪ್ಯೂಟರ್ ಸೆಲ್.